# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು–560 002**

**ಪತ್ರಿಕಾ ಪ್ರಕಟಣೆ** ದಿನಾಂಕ: 10.07.2019

**ಪೂಜ್ಯ ಮಹಾಪೌರರ ಅಧ್ಯಕ್ಷತೆಯಲ್ಲಿ ಎಲ್ಲ ಶಾಲಾ ಮುಖ್ಯಸ್ಥರ ಜೊತೆ ನಡೆದ ಸಭೆ:**

ದಕ್ಷಿಣ ವಲಯದಲ್ಲಿ ಪ್ಲಾಸ್ಟಿಕ್ ಬಳಕೆ ನಿಷೇಧ, ಕಸ ವಿಂಗಡಣೆ, ಪಿಓಪಿ ಗಣೇಶ ಮೂರ್ತಿ ಬದಲು ಮಣ್ಣಿನ ಗಣೇಶ ಮೂರ್ತಿಗಳನ್ನು ಉಪಯೋಗಿಸುವಂತೆ ಹಾಗೂ ನೀರನ್ನು ಪೋಲು ಮಾಡದಂತೆ ಪರಿಸರ ಸಂರಕ್ಷಣೆ ಮಾಡುವ ಕುರಿತು ಪೂಜ್ಯ ಮಹಾಪೌರರ ಅಧ್ಯಕ್ಷತೆಯಲ್ಲಿ ಎಲ್ಲ ಶಾಲಾ ಮುಖ್ಯಸ್ಥರ ಜೊತೆ ಸಭೆ ನಡೆಯಿತು.

ಪೂಜ್ಯ ಮಹಾಪೌರರ ಅಧ್ಯಕ್ಷತೆಯಲ್ಲಿ ಜಯನಗರದ ಕಮ್ಯುನಿಟಿ ಕಾಲೇಜು ಆಡಿಟೋರಿಯಂನಲ್ಲಿ ದಕ್ಷಿಣ ವಲಯ ಎಲ್ಲ ಶಾಲಾ ಮಕ್ಕಳ ಸಹಯೋಗದೊಂದಿಗೆ ಜಾಗೃತಿ ಜಾಥಾ ಆಯೊಜಿಸುವ ಕುರಿತು ಏರ್ಪಡಿಸಿದ್ದ ಸಭೆಯಲ್ಲಿ ದಕ್ಷಿಣ ವಲಯದ ಜಂಟಿ ಆಯುಕ್ತರು, ದಕ್ಷಿಣ ವಲಯದ ಮುಖ್ಯ ಇಂಜಿನಿಯರ್, ಕಮ್ಯುನಿಟಿ ಕಾಲೇಜಿನ ಅಧ್ಯಕ್ಷರು, ಎಲ್ಲ ಶಾಲಾ ಮುಖ್ಯಸ್ಥರುಗಳು, ಪಾಲಿಕೆ ಅಧಿಕಾರಿಗಳು ಹಾಗೂ ಇತರ ಗಣ್ಯರುಗಳು ಇದ್ದರು.

ದಕ್ಷಿಣ ವಲಯದಲ್ಲಿ ಪ್ಲಾಸ್ಟಿಕ್ ಬಳಕೆ ನಿಷೇಧ, ಕಸ ವಿಂಗಡಣೆ, ಪಿಓಪಿ ಗಣೇಶ ಮೂರ್ತಿ ಬದಲು ಮಣ್ಣಿನ ಗಣೇಶ ಮೂರ್ತಿಗಳನ್ನು ಉಪಯೋಗಿಸುವಂತೆ ಹಾಗೂ ನೀರನ್ನು ಪೋಲು ಮಾಡದಂತೆ ಪರಿಸರ ಸಂರಕ್ಷಣೆ ಮಾಡುವ ಕುರಿತು ಜಾಗೃತಿ ಮೂಡಿಸಲು ಎಲ್ಲ ಶಾಲೆಗಳ ಸಹಕಾರ ಬಹುಮುಖ್ಯವಾಗಿದ್ದು, ಎಲ್ಲ ಮಕ್ಕಳನ್ನು ಜಾಗೃತಿ ಜಾಥಾದಲ್ಲಿ ಕರೆತರುವಂತೆ ಶಾಲಾ ಮುಖ್ಯಸ್ಥರಿಗೆ ಮಹಾಪೌರರು ಸೂಚಿಸಿದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಮಹಾಪೌರರು, ಬಿಬಿಎಂಪಿ ವತಿಯಿಂದ ಎಲ್ಲ ವಲಯಗಳಲ್ಲೂ ಜಾಗೃತಿ ಜಾಥಾ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಅದರಂತೆ ಮೊದಲಿಗೆ ದಕ್ಷಿಣ ವಲಯದಲ್ಲಿ ಜಾಥಾ ಹಮ್ಮಿಕೊಳ್ಳಲಾಗುತ್ತಿದ್ದು, ಪಾಲಿಕೆಯ 20 ಹಾಗೂ ಖಾಸಗಿಯ 120 ಶಾಲೆಗಳ ಎಲ್ಲ ಮಕ್ಕಳನ್ನೂ ಜಾಥಾದಲ್ಲಿ ಪಾಲ್ಗೊಳ್ಳುವಂತೆ ಮಾಡಬೇಕು ಎಂದು ತಿಳಿಸಿದರು.

ನಗರದಲ್ಲಿ ಪ್ರತಿನಿತ್ಯ 5,700 ಟನ್ ತ್ಯಾಜ್ಯ ಉತ್ಪತ್ತಿ ಆಗುತ್ತಿದೆ. ಆದರೆ, ಸಾರ್ವಜನಿಕರ ನಿರ್ಲಕ್ಷ್ಯದಿಂದ ಸಮರ್ಪಕವಾಗಿ ಕಸ ವಿಂಗಡಣೆಯಾಗದ ಪರಿಣಾಮ ನಗರದಲ್ಲಿ ಕಸದ ಸಮಸ್ಯೆ ಬಿಗಡಾಯಿಸಿದೆ. ಆದ್ದರಿಂದ ಕಸ ವಿಲೇವಾರಿಗೆ ಹೊಸ ಟೆಂಡರ್ ಕರೆಯಲಾಗುತ್ತಿದ್ದು, ಸೆಪ್ಟೆಂಬರ್ 1 ರಿಂದ ಜಾರಿಯಾಗಲಿದೆ. ಆ ಬಳಿಕ ಹಸಿ ಕಸ ಮತ್ತು ಒಣ ಕಸವನ್ನು ಪ್ರತ್ಯೇಕವಾಗಿ ವಿಂಗಡಣೆ ಮಾಡಿಕೊಡಬೇಕು. ಇಲ್ಲವಾದರೆ ತೀವ್ರತರವಾದ ದಂಡ ವಿಧಿಸಲಾಗುತ್ತದೆ. ಅದಕ್ಕಾಗಿ 233 ಮಾರ್ಷಲ್ ಗಳನ್ನು ನೇಮಿಸಲಾಗುತ್ತಿದ್ದು, ದಂಡದ ಮೊತ್ತವನ್ನು ಒಂದರಿಂದ ಐದು ಪಟ್ಟು ಹೆಚ್ಚಿಸಲಾಗುತ್ತಿದೆ ಎಂದು ತಿಳಿಸಿದರು.

ಇನ್ನು ರಾಜ್ಯದೆಲ್ಲೆಡೆ ಪ್ಲಾಸ್ಟಿಕ್ ಬಳಕೆ ನಿಷೇಧಿಸಲಾಗಿದೆ. ಆದರೂ ನಗರದಲ್ಲಿ ಸಮರ್ಪಕವಾಗಿ ಪ್ಲಾಸ್ಟಿಕ್ ನಿಷೇಧವಾಗಿಲ್ಲ. ಈ ಪೈಕಿ ಪಾಲಿಕೆ ವತಿಯಿಂದ ಪ್ಲಾಸ್ಟಿಕ್ ಬಳಕೆ ನಿಷೇಧಕ್ಕೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದ್ದು, ಈಗಾಗಲೇ ಅಂಗಡಿ, ಹೋಟೆಲ್ ಮಾಲ್ಗಳ ಮಾಲೀಕರಿಗೆ, ವ್ಯಾಪಾರಸ್ಥರಿಗೆ, ಗ್ರಾಹಕರಿಗೆ ಜಾಗೃತಿ ಮೂಡಿಸಲಾಗುತ್ತಿದೆ. ಜತೆಗೆ ಪತ್ರಿಕೆ, ರೇಡಿಯೋಗಳಲ್ಲಿ ಜಾಹೀರಾತು ನೀಡಲಾಗುತ್ತಿದೆ. ಇದೇ ಜುಲೈ 15 ರಿಂದ ಎಲ್ಲ ವಲಯಗಲ್ಲಿ ಏಕಕಾಲಕ್ಕೆ ದಾಳಿ ನಡೆಸಿ ಪ್ಲಾಸ್ಟಿಕ್ ವಸ್ತುಗಳನ್ನು ಜಪ್ತಿ ಮಾಡಿ ದುಪ್ಪಟ್ಟು ದಂಡ ವಿಧಿಸಲಾಗುತ್ತದೆ. ಅಲ್ಲದೆ ಪ್ಲಾಸ್ಟಿಕ್ ಕೈ ಚೀಲ ಬಳಕೆ ಮಾಡುವ ಗ್ರಾಹಕರಿಗೂ ದಂಡ ವಿಧಿಸಲಾಗುವುದು ಎಂದರು.

ಪ್ಲಾಸ್ಟರ್ ಆಫ್ ಪ್ಯಾರಿಸ್ (ಪಿಓಪಿ) ಗಣೇಶ ಮೂರ್ತಿಗಳ ಬದಲು ಮಣ್ಣಿನ ಮೂರ್ತಿಗಳನ್ನು ಬಳಕೆ ಮಾಡುವುದರಿಂದ ಪರಿಸರ ಸಂರಕ್ಷಣೆ ಮಾಡಬಹುದು. ಪಾಲಿಕೆ ವ್ಯಾಪ್ತಿಯಲ್ಲಿ 156 ಕೆರೆಗಳಿದ್ದು, ಕೆರೆಗಳಿಗೆ ಪಿಓಪಿ ಗಣೇಶ ವಿಸರ್ಜನೆ ಮಾಡಿದರೆ ನೀರು ಮಲೀನವಾಗುತ್ತದೆ. ಆದ್ದರಿಂದ ಎಲ್ಲರೂ ಮಣ್ಣಿನ ಮೂರ್ತಿ ಗಣೇಶಗಳೇ ಬಳಸಬೇಕು. ಇತ್ತೀಚಿನ ದಿನಗಳಲ್ಲಿ ನೀರಿನ ಅಭಾವ ಹೆಚ್ಚಾಗುತ್ತಿದೆ. ಆದ್ದರಿಂದ ಎಲ್ಲ ನಾಗರಿಕರಲ್ಲಿ ನೀರಿನ ಮಿತಬಳಕೆ ಮಾಡಲು ಜಾಗೃತಿ ಮೂಡಿಸುವ ಜತೆಗೆ ಎಲ್ಲರೂ ಮಳೆ ನೀರು ಕೊಯ್ಲು ಅಳವಡಿಸಕೊಳ್ಳಲು ಮುಂದಾಗಬೇಕು ಎಂದು ಹೇಳಿದರು.

ಈ ಮೇಲಿನ ಎಲ್ಲ ಅಂಶಗಳ ಬಗ್ಗೆ ನಾಗರಿಕರಲ್ಲಿ ಜಾಗೃತಿ ಮೂಡಿಸಬೇಕಿದ್ದು, ಅದಕ್ಕೆ ಎಲ್ಲ ಶಾಲಾ ಮಕ್ಕಳ ಸಹಕಾರ ಬೇಕಿದೆ. ಮೊದಲು ಮಕ್ಕಳಲ್ಲಿ ಅರಿವು ಮೂಡಿಸಿದಾಗ ಮಕ್ಕಳು ಪೋಷಕರಿಗೆ ಮನವರಿಕೆ ಮಾಡುತ್ತಾರೆ. ಜತೆಗೆ ಅದನ್ನು ಪಾಲನೆ ಕೂಡಾ ಮಾಡುತ್ತಾರೆ. ಈ ಸಂಬಂಧ ದಕ್ಷಿಣ ವಲಯದಲ್ಲಿ ಮುಂದಿನ ವಾರ ಎಲ್ಲ ಶಾಲೆಗಳ ಮಕ್ಕಳ ಸಹಕಾರದಲ್ಲಿ ಜಾಗೃತಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ. ಜಾಥಾದಲ್ಲಿ ಎಲ್ಲರೂ ಪಾಲ್ಗೊಳ್ಳಬೇಕು ಎಂದು ಮಹಾಪೌರರು ತಿಳಿಸಿದರು.

ಜಾಥಾ ನಡೆಸುವ ಬಗ್ಗೆ ವಲಯ ಜಂಟಿ ಆಯುಕ್ತರ ಜತೆ ಚರ್ಚಿಸಿ ಯಾವ ರಸ್ತೆ ಮಾರ್ಗದಲ್ಲಿ ಸಾಗಬೇಕು ಎಂಬ ರೋಡ್ ಮ್ಯಾಪ್ ಅನ್ನು ಸಿದ್ಧಪಡಿಸಲು ಸೂಚಿಸಲಾಗಿದೆ. ಜತೆಗೆ ಪಾಲಿಕೆಯಿಂದಲೇ ಜಾಗೃತಿ ಮೂಡಿಸುವ ನಾಮಫಲಕಗಳನ್ನು ಸಿದ್ಧಪಡಿಸಿ ಮಕ್ಕಳಿಗೆ ವಿತರಿಸಲಾಗುವುದು ಎಂದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**


ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

